**ದಿನಾಂಕ: 20-08-2022 ರಂದು ಬೆಳಗ್ಗೆ 11:30 ಗಂಟೆಗೆ ವಾರ್ಡ್ ಸಂಖ್ಯೆ 165 ಗಣೇಶ ಮಂದಿರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಮೋಹಿತ್. ಆರ್ – ಸಹಾಯಕ ಅಭಿಯಂತರರು (ವಾರ್ಡ್ 165 ಗಣೇಶ ಮಂದಿರ) (ಕಿಯೋನಿಕ್ಸ್)
2. ಶ್ರೀ. ಪವನ್ – ಕಿರಿಯ ಆರೋಗ್ಯ ಪರಿವೀಕ್ಷಕರು

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 165 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡ್ ವ್ಯಾಪ್ತಿಯಲ್ಲಿ ಇರುವ ಪಾರ್ಕ್‌ಗಳ ಹತ್ತಿರ ಮಳೆನೀರು ನಿಂತು ಸೊಳ್ಳೆಗಳು ಜಾಸ್ತಿಯಾಗಿರುತ್ತದೆ ಎಂದು ಸಾರ್ವಜನಿಕರು ಕೋರಿದರು. ಅದರಂತೆ ಸದರಿ ಜಾಗಗಳಲ್ಲಿ ಔಷಧಿ ಸಿಂಪಡಿಸಲು ಕಿರಿಯ ಆರೋಗ್ಯ ಪರಿವೀಕ್ಷಕರು ರವರಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯ 13ನೇ ಮುಖ್ಯರಸ್ತೆಯ ಚರಂಡಿಗಳಲ್ಲಿ ಡೆಬ್ರಿಸ್ ಇರುವುದರಿಂದ ಮಳೆನೀರು ತುಂಬಿ ರಸ್ತೆಯಲ್ಲಿ ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ತಿಳಿಸಿದರು. ಸದರಿ ರಸ್ತೆಯ ಚರಂಡಿಯಲ್ಲಿ ಡೆಬ್ರಿಸ್‌ಗಳನ್ನು ತೆಗೆದು ಮಳೆನೀರು ಸರಾಗವಾಗಿ ಹರಿಯುವಂತೆ ಅನುಕೂಲ ಮಾಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ತಿಳಿಸಿದರು.

ವಾರ್ಡ್ ವ್ಯಾಪ್ತಿಯ 28ನೇ ಮುಖ್ಯರಸ್ತೆಯ ಚರಂಡಿಗಳಲ್ಲಿ ಡೆಬ್ರಿಸ್ ಇರುವುದರಿಂದ ಮಳೆನೀರು ಚರಂಡಿಯಲ್ಲಿ ತುಂಬಿ ರಸ್ತೆಯಲ್ಲಿ ನೀರು ಹರಿಯುತ್ತಿರುತ್ತದೆ ಎಂದು ಸಾರ್ವಜನಿಕರು ದೂರು ನೀಡಿರುತ್ತಾರೆ. ಅದರಂತೆ ಸದರಿ ರಸ್ತೆಯ ಚರಂಡಿಯಲ್ಲಿ ಡೆಬ್ರಿಸ್‌ಗಳನ್ನು ತೆಗೆಯುವಂತೆ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

ಬನಂಶಕರಿ 2ನೇ ಹಂತದ ದೇವಗಿರಿ ದೇವಸ್ಥಾನದ ಸುತ್ತಾಮುತ್ತಾ ಮಳೆಯಿಂದಾಗಿ ಮರಗಳ ರೆಂಬೆಕೊಂಬೆಗಳು ಬಿದ್ದಿರುತ್ತದೆ. ಸದರಿ ರೆಂಬೆಕೊಂಬೆಗಳನ್ನು ತೆರವುಗೊಳಿಸಿಕೊಡುವಂತೆ ಸಾರ್ವಜನಿಕರು ಕೋರಿದರು. ಅದರಂತೆ ತಕ್ಷಣ ಸದರಿ ಮರದ ರೆಂಬೆಕೊಂಬೆಗಳನ್ನು ತೆರವುಗೊಳಿಸಲು ಅರಣ್ಯಾಧಿಕಾರಿಗಳಿಗೆ ಸೂಚಿಸಲಾಯಿತು.

ವಾರ್ಡ್ ವ್ಯಾಪ್ತಿಯ ಬನಶಂಕರಿ 2ನೇ ಹಂತದಲ್ಲಿ ಇರುವ ರಸ್ತೆಗುಂಡಿಗಳನ್ನು ಮುಚ್ಚಿ ಸಾರ್ವಜನಿಕರ ಮುಕ್ತ ಸಂಚಾರಕ್ಕೆ ಅನುವು ಮಾಡಿಕೊಡಲಾಗಿರುತ್ತದೆ.

ವಾರ್ಡ್ ವ್ಯಾಪ್ತಿಯಲ್ಲಿ ತುಂಬಾ ಹಾಳಾಗಿರುವ ರಸ್ತೆಗಳಿಗೆ ಡಾಂಬರೀಕರಣ ಮಾಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗಿರುತ್ತದೆ ಎಂದು ಸಹಾಯಕ ಅಭಿಯಂತರರು ರವರು ತಿಳಿಸಿದರು.

ಮು.ತಿ.ನೋ

ವಾರ್ಡ್ ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಾರ್ವಜನಿಕರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಶ್ರೀ. ಮೋಹಿತ್, ಸಹಾಯಕ ಅಭಿಯಂತರರು (ಕಿಯೋನಿಕ್ಸ್) ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

R. mohit

ಸಹಾಯಕ ಅಭಿಯಂತರರು
(ಕಿಯೋನಿಕ್ಸ್)
ವಾರ್ಡ್ ಸಂಖ್ಯೆ 165
ಗಣೇಶ ಮಂದಿರ